ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

**ವಿಷಯ:** ದಿನಾಂಕ: 01.01.2018 ರಿಂದ ಅನ್ವಯಿಸುವಂತೆ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಬಗ್ಗೆ.

***

**ಓದಲಾಗಿದೆ:-**

1. ದಿನಾಂಕ: 01.07.2017 ರಿಂದ ಅನ್ವಯವಾಗುವಂತೆ ನಿಗಮದ ನೌಕರರಿಗೆ ತುಟ್ಟಿಭತ್ಯೆಯನ್ನು ಶೇಕಡ 43.25 ರಿಂದ ಶೇಕಡ 45.25 ಹೆಚ್ಚಿಸಿ ಮಂಜೂರು ಮಾಡಿದ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/3610(Vol.III)/2003-04, ದಿನಾಂಕ: 11.10.2017.
2. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 02.03.2018 ರಂದು ಕವಿಪ್ರನಿನಿ ನೌಕರರ ಸಂಘ (ನೋ.ಸ.659) ಮತ್ತು ನಿಗಮದ ಆಡಳಿತ ವರ್ಗದ ನಡುವೆ ಆದ ಒಪ್ಪಂದ.
3. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 1.4.2017 ರಿಂದ ಜಾರಿಗೆ ಬರುವಂತೆ ನಿಗಮದ ನೌಕರರಿಗೆ ಮತ್ತು ಅಧಿಕಾರಿಗಳಿಗೆ ಸಂಬಂಧಪಟ್ಟಂತೆ ಹೊರಡಿಸಲಾದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69516/2017-18 ಮತ್ತು ಕವಿಪ್ರನಿನಿ/ಬಿ16/69517/2017-18 ದಿನಾಂಕ: 09.03.2018.
4. ದಿನಾಂಕ: 01.04.2017 ರಿಂದ ಅನ್ವಯವಾಗುವಂತೆ ನಿಗಮದ ನೌಕರರು ಮತ್ತು ಅಧಿಕಾರಿಗಳಿಗೆ ಪರಿಷ್ಕೃತ ವೇತನದ ವ್ಯತ್ಯಾಸದ ಮೊತ್ತವನ್ನು ನಾಲ್ಕು ಕಂತುಗಳಲ್ಲಿ ಪಾವತಿಸಲು ಅನುಮೋದಿಸಿರುವ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69516/2017-18, ದಿನಾಂಕ: 04.06.2018.
5. ದಿನಾಂಕ: 01.07.2017 ರಿಂದ ಅನ್ವಯವಾಗುವಂತೆ ಮಂಜೂರು ಮಾಡಲಾಗಿರುವ ಶೇಕಡ 45.25 ರಷ್ಟು ತುಟ್ಟಿಭತ್ಯೆಯನ್ನು 'ಡಿಯರ್‌ನೆಸ್ ಪೇ' ಎಂದು ಪರಿಗಣಿಸಿ ಹೊರಡಿಸಿರುವ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/3610/2003-04 ದಿನಾಂಕ: 21.06.2018.
6. ದಿನಾಂಕ: 01.01.2018 ರಿಂದ ಜಾರಿಗೆ ಬರುವಂತೆ, ರಾಜ್ಯ ಸರ್ಕಾರಿ ನೌಕರರಿಗೆ ತುಟ್ಟಿಭತ್ಯೆಯ ದರವನ್ನು ಪರಿಷ್ಕರಿಸಿ ಹೊರಡಿಸಲಾಗಿರುವ ಸರ್ಕಾರಿ ಆದೇಶ ಸಂಖ್ಯೆ: ಆಇ 12 ಎಸ್‌ಆರ್‌ಪಿ 2018 ದಿನಾಂಕ: 18.06.2018.
7. ನಿಗಮದ, ದಿನಾಂಕ: 24.06.2018 ರ ಟಿಪ್ಪಣಿ.

**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/3610(Vol.III)/2003-04, ಬೆಂಗಳೂರು, ದಿನಾಂಕ: 29.06.2018**

1. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ತನ್ನ ನೌಕರರಿಗೆ ದಿನಾಂಕ 1ನೇ ಜನವರಿ 2018 ರಿಂದ ಜಾರಿಗೆ ಬರುವಂತೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ವೇತನದ ಶೇಕಡ 1.75 ರಷ್ಟು ಮಂಜೂರು ಮಾಡಿದೆ.

2. ಈ ಆದೇಶದ ಮೇರೆಗೆ ಮಂಜೂರಾಗಿರುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶ ಹೊರಡಿಸುವವರೆಗೆ ನಗದಾಗಿ ಈ ಕೆಳಕಂಡಂತೆ ಪಾವತಿ ಮಾಡುವುದು.

   i) **ಏಪ್ರಿಲ್-2018, ಮೇ-2018 ಮತ್ತು ಜೂನ್-2018 ರ ಅವಧಿಯ ತುಟ್ಟಿಭತ್ಯೆಯ ಬಾಕಿ ಮೊತ್ತವನ್ನು ಪಾವತಿಸುವುದು.**

   ii) **ಜುಲೈ-2018 ರ ತಿಂಗಳಿನಿಂದ ಶೇ.1.75ರ ತುಟ್ಟಿ ಭತ್ಯೆಯನ್ನು ಮಾಸಿಕ ವೇತನದೊಡನೆ ಪಾವತಿಸುವುದು.**

3. ನಿಗಮದ ದಿನಾಂಕ: 04.06.2018 ರ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69516/2017–18 ರಲ್ಲಿ ವೇತನ ಪರಿಷ್ಕರಣೆಯ ಏಪ್ರಿಲ್–2017 ರಿಂದ ಮಾರ್ಚ್–2018 ರ ಅವಧಿಯ ಬಾಕಿ ಮೊತ್ತವನ್ನು ನಾಲ್ಕು ಕಂತುಗಳಲ್ಲಿ(ಜೂನ್–2018 ರಿಂದ ಸೆಪ್ಟಂಬರ್–2018) ಪಾವತಿಸಲು ತಿಳಿಸಲಾಗಿರುತ್ತದೆ. ಅದರನ್ವಯ **ಜನವರಿ–2018 ರಿಂದ ಮಾರ್ಚ್–2018 ರ ಅವಧಿಯ ಪರಿಷ್ಕೃತ ವೇತನದ ಬಾಕಿ ಮೊತ್ತವನ್ನು ಸೆಪ್ಟಂಬರ್–2018 ರಲ್ಲಿ ಪಾವತಿಸಬೇಕಿರುತ್ತದೆ. ಆದುದರಿಂದ ಜನವರಿ–2018 ರಿಂದ ಮಾರ್ಚ್–2018 ರ ಅವಧಿಯ ತುಟ್ಟಿಭತ್ಯೆಯ ಬಾಕಿ ಮೊತ್ತವನ್ನು ಸೆಪ್ಟಂಬರ್–2018 ರಲ್ಲಿ ಪಾವತಿಸುವುದು.**
4. ಕಾಲಿಕ ವೇತನ ಶ್ರೇಣಿಯಲ್ಲಿರುವ ಪೂರ್ಣಾವಧಿ ನೌಕರರಿಗೆ ಈ ಆದೇಶ ಅನ್ವಯಿಸುತ್ತದೆ. ಆದರೆ ದಿನಗೂಲಿಯಾಗಿ ಕೆಲಸ ಮಾಡುತ್ತಿರುವ ಮತ್ತು ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರಿಗೆ ಈ ಆದೇಶ ಅನ್ವಯಿಸುವುದಿಲ್ಲ.
5. ಈ ಆದೇಶಗಳ ಉದ್ದೇಶಗಳಿಗಾಗಿ ಮೂಲ ವೇತನ ಎಂದರೆ ನೌಕರರು ಧಾರಣ ಮಾಡಿರುವ ಹುದ್ದೆಗಳಿಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ಪಡೆಯುವ ಮೂಲ ವೇತನ, ಡಿಯರ್‌ನೆಸ್ ಪೇ ಮತ್ತು ಈ ಕೆಳಗೆ ತಿಳಿಸಿರುವ ಇತರೆ ಸೌಲಭ್ಯಗಳನ್ನು ಸಹ ಒಳಗೊಂಡಿರುತ್ತದೆ:
   i) ನಿಗಮದ ನಿಯಮಗಳಿಗನುಸಾರವಾಗಿ ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ನೀಡಲಾಗಿರುವ ಸ್ಟಾಗ್ನೇಷನ್/ಎಲಾಂಗೇಷನ್/ಅಡಿಷನಲ್/ಮುಂಗಡ ವೇತನ ಬಡ್ತಿಗಳು.
   ii) ನಿಗಮದ ನಿಯಮಗಳಿಗನುಸಾರವಾಗಿ ನೀಡಲಾಗಿರುವ ವೈಯಕ್ತಿಕ ವೇತನ (Personal Pay)
6. ಮೂಲ ವೇತನಕ್ಕೆ ನಿರೂಪಿಸಿರುವುದನ್ನು ಹೊರತುಪಡಿಸಿ, ಇತರೆ ಯಾವುದೇ ಉಪಲಬ್ಧಗಳು ಸೇರತಕ್ಕದ್ದಲ್ಲ. ತುಟ್ಟಿಭತ್ಯೆಯ ಗಣನೆಗೆ ವಿಶೇಷ ವೇತನ, ಪ್ರಭಾರ ಭತ್ಯೆ ಮತ್ತು ಇತರೆ ಭತ್ಯೆಗಳನ್ನು ವೇತನವೆಂದು ಪರಿಗಣಿಸಲಾಗುವುದಿಲ್ಲ.
7. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಲು 50 ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಾಂಕಗೊಳಿಸತಕ್ಕದ್ದು ಮತ್ತು 50 ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.
8. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ಕಾಣಿಸುವುದನ್ನು ಮುಂದುವರಿಸಲಾಗುವುದು ಹಾಗೂ ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನವೆಂದು ಪರಿಗಣಿಸಲಾಗುವುದಿಲ್ಲ.

**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಹಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ನಿರ್ದೇಶಕರು (ಹಣಕಾಸು), ಬೆಸ್ಕಾಂ, ಬೆಂಗಳೂರು.
4. ಪ್ರಧಾನ ವ್ಯವಸ್ಥಾಪಕರು(ಸಿಬ್ಬಂದಿ), ಕವಿಪ್ರನಿನಿ, ಬೆಂಗಳೂರು.
5. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
6. ಎಲ್ಲಾ ಮುಖ್ಯ ಇಂಜನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
7. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ.

www.kptcl.com/eprasarana for information of:

8. ಎಲ್ಲಾ ಅಧೀಕ್ಷಕ ಇಂಜನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
9. ಎಲ್ಲಾ ಕಾರ್ಯನಿರ್ವಾಹಕ ಇಂಜನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
10. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

<u>ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-</u>

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಎ.ಎನ್.ಜಯರಾಜ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ ಬೆಂಗಳೂರು.